# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ಸದಸ್ಯರ ಹೆಸರು | ಶ್ರೀ ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 196 |
| ಉತ್ತರಿಸಬೇಕಾದ ದಿನಾಂಕ | 14.02.2024 |
| ಉತ್ತರಿಸಬೇಕಾದ ಸಚಿವರು | ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಮುಖ್ಯಮಂತ್ರಿಗಳ ವಸತಿ ಯೋಜನೆಯಡಿ ಫಲಾನುಭವಿಗಳ ಆಯ್ಕೆ ಮಾಡಲು ಇರುವ ರೀತಿ ನೀತಿಗಳು/ ಮಾನದಂಡವೇನು (ವಿವರ ನೀಡುವುದು) | "ಒಂದು ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆಯಡಿ" ಫಲಾನುಭವಿಗಳ ಆಯ್ಕೆಗೆ ನಿಗದಿಪಡಿಸಲಾಗಿರುವ ಮಾನದಂಡಗಳು ಈ ಕೆಳಗಿನಂತಿವೆ:-<br><br>1. ಅರ್ಜಿದಾರರ ಕುಟುಂಬದ ವಾರ್ಷಿಕ ಆದಾಯ ರೂ.3,00,000/- (ಮೂರು ಲಕ್ಷ ರೂಪಾಯಿಗಳು ಮಾತ್ರ) ಗಳ ಮಿತಿಯೊಳಗಿರಬೇಕು.<br>2. ಅರ್ಜಿದಾರರು ಕನಿಷ್ಟ 5 ವರ್ಷಗಳಿಂದ ಬೆಂಗಳೂರು (ನಗರ) ಜಿಲ್ಲೆಯ ವ್ಯಾಪ್ತಿಯಲ್ಲಿ ವಾಸವಿರುವ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಪಡೆದ ವಾಸ ಧೃಡೀಕರಣ ಪತ್ರವನ್ನು ಸಲ್ಲಿಸುವುದು ಕಡ್ಡಾಯವಾಗಿರುತ್ತದೆ.<br>3. ವಸತಿರಹಿತ ಕುಟುಂಬವಾಗಿರಬೇಕು.<br>4. ಆಧಾರ್ ಸಂಖ್ಯೆಯನ್ನು ಕಡ್ಡಾಯವಾಗಿ ಹೊಂದಿರಬೇಕು.<br>5. ಅರ್ಜಿದಾರರು ಪಡಿತರ ಚೀಟಿಯನ್ನು ಹೊಂದಿರಬೇಕು.<br>6. ಆದಾಯ ಪ್ರಮಾಣ ಪತ್ರ ಕಡ್ಡಾಯವಾಗಿರುತ್ತದೆ .<br>7. ಜಾತಿ ಆಧಾರಿತ ಮೀಸಲಾತಿ ಪಡೆಯಲಿಚ್ಛಿಸುವವರಿಗೆ ಜಾತಿ ಪ್ರಮಾಣ ಪತ್ರ ಕಡ್ಡಾಯವಾಗಿರುತ್ತದೆ .<br>8. ಅರ್ಜಿದಾರರು ಕಟ್ಟಡ ನಿರ್ಮಾಣ ಕಾರ್ಮಿಕರಾಗಿದ್ದಲ್ಲಿ ಕಾರ್ಮಿಕ ಇಲಾಖೆಯ ನೋಂದಣಿ ಸಂಖ್ಯೆ ಹೊಂದಿರಬೇಕು.<br>9. ಅರ್ಜಿದಾರರು ಚುನಾವಣಾ ಆಯೋಗದ ಗುರುತಿನ ಚೀಟಿಯನ್ನು ಹೊಂದಿರಬೇಕು.<br>10. ಅರ್ಜಿದಾರರು ವಿಕಲಚೇತನರಾಗಿದ್ದಲ್ಲಿ, ಆ ಬಗ್ಗೆ ಪ್ರಮಾಣ ಪತ್ರವನ್ನು ಹೊಂದಿರಬೇಕು.<br>11. ಪ್ರತಿ ಕುಟುಂಬಕ್ಕೆ ಒಂದು ಅರ್ಜಿಯನ್ನು ಮಾತ್ರ ಸಲ್ಲಿಸಲು ಅವಕಾಶವಿದೆ.<br>12. ಆಯ್ಕೆಗೊಂಡ ಅರ್ಜಿದಾರರು ಪ್ರಾರಂಭಿಕ ಠೇವಣಿಯಾಗಿ ರೂ.50,000/- (ಐವತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತವು ಸೂಚಿಸಿದ ಸಮಯದಲ್ಲಿ ಆನ್ ಲೈನ್ ಮುಖಾಂತರ ಪಾವತಿಸಬೇಕು.<br>13. ಫಲಾನುಭವಿಗಳಿಗೆ ಮನೆಗಳ ಹಂಚಿಕೆಯ ಮೀಸಲಾತಿಯನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಶೇಕಡಾ 40 (ನಲವತ್ತು) ರಷ್ಟು, ಅಲ್ಪಸಂಖ್ಯಾತರಿಗೆ ಶೇಕಡಾ 10 (ಹತ್ತು) ರಷ್ಟು ಹಾಗೂ ಇತರೆ ವರ್ಗಕ್ಕೆ ಶೇಕಡಾ 50 (ಐವತ್ತು) ರಷ್ಟು ಎಂಬುದಾಗಿ ನಿಗದಿಪಡಿಸಲಾಗಿದೆ. ಯೋಜನೆಯ ಒಟ್ಟು ಶೇಕಡಾ 2 ರಷ್ಟು ಮನೆಗಳನ್ನು ವಿಕಲಚೇತನರಿಗೆ ನೆಲಮಹಡಿಯಲ್ಲಿ ಮೀಸಲಿರಿಸಿದೆ. |
| ಆ) | ಕಳೆದ 3 ವರ್ಷಗಳಲ್ಲಿ ಮುಖ್ಯ ಮಂತ್ರಿಗಳ ವಸತಿ ಯೋಜನೆಯಡಿಯಲ್ಲಿ ವರ್ಷಕ್ಕೆ ಎಷ್ಟು ಮನೆ ನಿರ್ಮಿಸಲು ಉದ್ದೇಶಿಸಲಾಗಿದೆ; ಇದಕ್ಕೆ ತಗಲುವ ವಾರ್ಷಿಕ ವೆಚ್ಚ ಎಷ್ಟು; (ವಾರ್ಷಿಕವಾರು ವಿವರ ನೀಡುವುದು) | "ಒಂದು ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆಯಡಿ" ಕಳೆದ 3 ವರ್ಷಗಳಲ್ಲಿ 7952 ಮನೆಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದ್ದು, ಇದಕ್ಕೆ ರೂ 874.02 ಕೋಟಿಗಳ ಯೋಜನಾ ವೆಚ್ಚವು ತಗಲುತ್ತದೆ. |

| | | |
|---|---|---|
| ಇ) | ಈ ಯೋಜನೆಯನ್ನು ರಾಜ್ಯದಲ್ಲಿ ಯಾವ-ಯಾವ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ? (ವಿವರ ನೀಡುವುದು) | "**ಒಂದು ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆ**ಯು ಬೆಂಗಳೂರು ನಗರ ಜಿಲ್ಲೆಗೆ ಮಾತ್ರ ಸೀಮಿತವಾಗಿರುತ್ತದೆ. |

ಸಂಖ್ಯೆ: ವಇ 21 ಹೆಚ್‌ಎಫ್‌ಎ 2024]

(ಬಿ.ಝೆಡ್. ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್, ಮತ್ತು ಅಲ್ಪ ಸಂಖ್ಯಾತರ
ಕಲ್ಯಾಣ ಸಚಿವರು